# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com

---

ಕ್ರಮಸಂಖ್ಯೆ: ಕಸಾಪ/ವ್ಯ.ವಿ./ಪ್ರಕಟಣೆ/೨೦೨೨–೨೩ ದಿನಾಂಕ: ೦೯–೦೬–೨೦೨೨

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**

……………………………………………
ಬೆಂಗಳೂರು

**ಮಾನ್ಯರೆ,**

## ಪತ್ರಿಕಾ/ಟಿ.ವಿ. ಹೇಳಿಕೆ – ಪ್ರಕಟಣೆ ಕೃಪೆಗಾಗಿ

## ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವ ಪಡೆದುಕೊಂಡ ವಿಶ್ರಾಂತ ನ್ಯಾಯಮೂರ್ತಿ ಶಿವರಾಜ್ ಪಾಟೀಲ ಹಾಗೂ ಅವರ ಕುಟುಂಬ

ಬೆಂಗಳೂರು : **ಸುಪ್ರಿಂ ಕೋರ್ಟ್‌ನ ನಿವೃತ ನ್ಯಾಯಮೂರ್ತಿ, ಕರ್ನಾಟಕ ರಾಜ್ಯದ ಮಾಜಿ ಲೋಕಾಯುಕ್ತರು ಹಾಗೂ ಹಿರಿಯರು ಆಗಿರುವ ನ್ಯಾಯಮೂರ್ತಿ ಶಿವರಾಜ್ ಪಾಟೀಲರು** ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವನ್ನು ಪಡೆದುಕೊಂಡಿದ್ದಾರೆ.

ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜಾನಪದ ಹಾಗೂ ಕನ್ನಡ-ಕನ್ನಡಿಗ-ಕರ್ನಾಟಕದ ಹಿನ್ನೆಲೆಯಲ್ಲಿ ಹಾಗೂ ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿ ರೂಪಿಸುವ ಉದ್ದೇಶದಿಂದ ಮನೆ ಮನೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಅಭಿಯಾನವನ್ನು ಪ್ರಾರಂಭಿಸಲಾಗಿದೆ. ಈ ಹಿನ್ನೆಲೆಯಲ್ಲಿ **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ರಾಜ್ಯಾದ್ಯಂತ ಗಣ್ಯರಿಂದ ಜನಸಾಮಾನ್ಯರವರೆಗೆ , ವಿವಿಧ ಕ್ಷೇತ್ರಗಳಲ್ಲಿ ಸಾಧನಗೈದ ಮಹನೀಯರುಗಳ ಮನೆಗೆ ಭೇಟಿ ನೀಡುತ್ತಿದ್ದಾರೆ. ಈ **ಸಂದರ್ಭದಲ್ಲಿ ನ್ಯಾ.ಶಿವರಾಜ್ ಪಾಟೀಲರ** ಮನೆಗೆ ತೆರಳಿದಾಗ ಮಾನ್ಯ ನ್ಯಾಯಮೂರ್ತಿಗಳು ಹಾಗೂ ಅವರ ಕುಟುಂಬಸ್ತರಾದ **ಶ್ರೀಮತಿ ಅನ್ನಪೂರ್ಣಾ ಶಿವರಾಜ ಪಾಟೀಲ, ಡಾ|| ಶರಣ ಶಿವರಾಜ್ ಪಾಟೀಲ ಮತ್ತು ಶ್ರೀಮತಿ ಮೀನಾ ಶರಣ ಪಾಟೀಲ** ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವವನ್ನು ಪಡೆದುಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕೋಶ್ಯಾಧ್ಯಕ್ಷರಾದ **ಬಿ.ಎಂ. ಪಟೇಲ್‌ಪಾಂಡು** ಉಪಸ್ಥಿತರಿದ್ದರು.

ಭಾವಚಿತ್ರ: ಸುಪ್ರಿಂ ಕೋರ್ಟ್‌ನ ನಿವೃತ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯದ ಮಾಜಿ ಲೋಕಾಯುಕ್ತರು ಆಗಿರುವ ನ್ಯಾಯಮೂರ್ತಿ ಶಿವರಾಜ್ ಪಾಟೀಲರು ಕನ್ನಡಿಗರ ಪ್ರಾತಿನಿದಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವನ್ನು ಪಡೆದುಕೊಂಡರು.

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು